ಕಾರ್ಯಾಚರಣೆಯಿಂದ ಸಂಸ್ಥೆಗೆ ಪ್ರತಿದಿನ ಸರಾಸರಿ ₹ 93.71 ಲಕ್ಷ ಆದಾಯ ಬರುತ್ತಿದೆ.

ಪ್ರಸಕ್ತ ಸಾಲಿನ ಕ್ರಿಯಾಯೋಜನೆಯಂತೆ ಸಂಸ್ಥೆಯು 694 ಹವಾನಿಯಂತ್ರಣರಹಿತ ಸಾಮಾನ್ಯ ವಾಹನಗಳನ್ನು ಖರೀದಿ ಮಾಡಲು ತೀರ್ಮಾನಿಸಿರುತ್ತದೆ.

ಬಸ್ ಡಿಪೋ ನಿರ್ಮಾಣ

280 (3930), ಶ್ರೀ ಮಂಕಾಳ ಸುಬ್ಬ ವೈದ್ಯ (ಭಟ್ಕಳ)

ಅ) ಉತ್ತರ ಕನ್ನಡ ಜಿಲ್ಲೆ ಭಟ್ಕಳ ಬಸ್ ಡಿಪೋ ಸ್ಥಳಾಂತರ ಮಾಡಲು ಟೆಂಡರ್ ಆಗಿದ್ದರೂ ಕೂಡ ಇನ್ನೂ ಕಾಮಗಾರಿ ಪ್ರಾರಂಭ ಆಗದೇ ಇರಲು ಕಾರಣಗಳೇನು;

ಆ) ಹಾಗಿದ್ದಲ್ಲಿ, ಈ ರೀತಿ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಇನ್ನು ಎಷ್ಟು ದಿನದಲ್ಲಿ ಈ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಉತ್ತರ ಕನ್ನಡ ಜಿಲ್ಲೆ ಭಟ್ಕಳದಲ್ಲಿ ಹೊಸ ಬಸ್ ಘಟಕ ನಿರ್ಮಿಸಲು ಅರಣ್ಯ ಇಲಾಖೆಯಿಂದ ಮೊದಲನೇ ಹಂತದ ಮಂಜೂರಾತಿಯಲ್ಲಿ 01 ಹೆಕ್ಟೇರ್ ಅರಣ್ಯ ಭೂಮಿಯನ್ನು ₹ 11,84,000 ಗಳನ್ನು ಪಾವತಿಸಿ, ಅರಣ್ಯ ಭೂಮಿಯ ಹದ್ದುಬಸ್ತು ಗುರುತಿಸಲು ₹ 14.25 ಲಕ್ಷಗಳ ವೆಚ್ಚದಲ್ಲಿ ಸುತ್ತುಗೋಡೆ ನಿರ್ಮಿಸಲಾಗಿರುತ್ತದೆ.

ಬಸ್ ಘಟಕ ನಿರ್ಮಾಣಕ್ಕೆ ಬೇಕಾಗಿರುವ ಅರಣ್ಯ ಭೂಮಿಯನ್ನು ಸಾರಿಗೆ ಸಂಸ್ಥೆಯ ವಶಕ್ಕೆ ಪಡೆದುಕೊಳ್ಳುವ ಪ್ರಕ್ರಿಯೆ

ಪ್ರಗತಿಯಲ್ಲಿರುತ್ತದೆ. ಸದರಿ ಭೂಮಿಯನ್ನು ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಲು ಅಂತಿಮ ಅನುಮೋದನೆ ಕೋರಿ ಪ್ರಧಾನ ಮುಖ್ಯ ಅರಣ್ಯಾಧಿಕಾರಿಗಳು, ಭಾರತ ಸರ್ಕಾರ, ವಲಯ ಕಛೇರಿ(ದಕ್ಷಿಣ ವಲಯ) ಇವರಿಗೆ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಪತ್ರ ಬರೆಯಲಾಗಿದೆ.

ಈವರೆವಿಗೂ ಅರಣ್ಯ ನಿವೇಶನವು ಸಾರಿಗೆ ಸಂಸ್ಥೆಗೆ ಹಸ್ತಾಂತರವಾಗದೆ ಇರುವುದರಿಂದ ಬಸ್ ಘಟಕ ಸ್ಥಾಪಿಸುವ ಕಾಮಗಾರಿ ಪ್ರಾರಂಭವಾಗಿರುವುದಿಲ್ಲ.

ಆ) ಹೌದು.

ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅರಣ್ಯ ಇಲಾಖೆಯಿಂದ ಭೂಮಿಯನ್ನು ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಿದ ನಂತರ ಬಸ್ ಘಟಕ ನಿರ್ಮಾಣ ಕಾಮಗಾರಿ ಪ್ರಾರಂಭಿಸುವುದು.

ಹಾಸ್ಟೆಲ್‌ಗಳನ್ನು ಪ್ರಾರಂಭಿಸುವುದು

281 (3929), ಶ್ರೀ ವಡ್ನಾಳ್ ರಾಜಣ್ಣ (ಚನ್ನಗಿರಿ)

ಅ) ಚನ್ನಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಗೊಪ್ಪೇನಹಳ್ಳಿ ಪಾಂಡೋಮಟ್ಟಿ ಮಧ್ಯ ಹಿಂದುಳಿದ ವರ್ಗಗಳ ಹಾಸ್ಟೆಲ್ ಪ್ರಾರಂಭಿಸಲಾಗುವುದೇ;

ಆ) ಹಾಗಾದರೆ, ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಇಲ್ಲ

ಆ) ಗೊಪ್ಪೇನಹಳ್ಳಿಗೆ ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಮಂಜೂರು ಮಾಡುವ ಬಗ್ಗೆ ಕೋರಿಕೆ ಇದ್ದು, ಪ್ರಸಕ್ತ ಸಾಲಿನಲ್ಲಿ ಯಾವುದೇ ಮೆಟ್ರಿಕ್–ಪೂರ್ವ ವಿದ್ಯಾರ್ಥಿ ನಿಲಯಗಳನ್ನು